ಕರ್ನಾಟಕವನ್ನು, ಇಡೀ ರಾಷ್ಟ್ರವನ್ನು ಉಳಿಸುವಂಥ ಕೆಲಸ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ. ಧನ್ಯವಾದಗಳು.

ಅರಕಲಗೂಡಿನಲ್ಲಿ ರೈತರ ಆತ್ಮಹತ್ಯೆಯ ಬಗ್ಗೆ

62(126) ಶ್ರೀ ರಾಮಲಿಂಗಾ ರೆಡ್ಡಿ:(ಬಿ ಟಿ ಎಂ ಲೇಔಟ್) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಕಲಗೂಡು ತಾಲ್ಲೂಕಿನಲ್ಲಿ ಇತ್ತೀಚೆಗೆ ಸಾಲಬಾಧೆ ತಾಳಲಾರದೆ ಇಬ್ಬರು ರೈತರು ಆತ್ಮಹತ್ಯೆಗೆ ಶರಣಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ

ಆ) ಹಾಗಿದ್ದಲ್ಲಿ, ಮೃತಪಟ್ಟ ರೈತ ಕುಟುಂಬಕ್ಕೆ ಸರ್ಕಾರ ಪರಿಹಾರ ನೀಡಿರುವುದೇ

ಇ) ಸಾಲ ಬಾಧೆಯಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್ ಎ ರವಿಂದ್ರನಾಥ್(ಕೃಷಿ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಮೃತ ಪಟ್ಟ ರೈತ ಕುಟುಂಬಕ್ಕೆ ಪರಿಹಾರ ನೀಡುವ ಕ್ರಮ ಪ್ರಗತಿಯಲ್ಲಿದೆ. ವಿವರ ಈ ಕೆಳಗಿನಂತಿದೆ.

1. ಶ್ರೀ ಬಿ.ಎನ್. ಸತೀಶ್ ಬಿನ್ ನಿಂಗೇಗೌಡ ಚಿಕ್ಕ ಬೊಮ್ಮನ ಹಳ್ಳಿ ಗ್ರಾಮ, ಕೊಣನೂರು (ಹೋಬಳಿ), ಇವರು ದಿನಾಂಕ 19-03-2010 ರಂದು ಆತ್ಮಹತ್ಯೆ ಮಾಡಿಕೊಂಡಿದ್ದು. ಇವರ ಹಕ್ಕಿನಲ್ಲಿ ಕೃಷಿ ಭೂಮಿ ಇಲ್ಲದಿರುವುದರಿಂದ ರೈತಾಪಿ ವರ್ಗಕ್ಕೆ ಸೇರಿರುವುದಿಲ್ಲವೆಂದು ಸಮಿತಿಯು ತೀರ್ಮಾನಿಸಿ ಸರ್ಕಾರದಿಂದ ನೀಡುವ ಪರಿಹಾರಕ್ಕೆ ಅರ್ಹವಲ್ಲವೆಂದು ಈ ಪ್ರಕರಣವನ್ನು ತಿರಸ್ಕರಿಸಿದೆ.
2. ಶ್ರೀ ಸತ್ಯಮೂರ್ತಿ ಬಿನ್ ಕಾಳೇಗೌಡ, ಹನ್ಯಾಳು ಗ್ರಾಮ, ರಾಮನಾಥಪುರ (ಹೋಬಳಿ), ರವರು ದಿನಾಂಕ 04-06-2010ರಂದು ಆತ್ಮಹತ್ಯೆ ಮಾಡಿಕೊಂಡಿದ್ದು; ಈ ಪ್ರಕರಣಕ್ಕೆ ಸಂಬಂಧಿಸಿದ ದಾಖಲಾತಿಗಳಾದ ಮಹಜರು ಆರ್.ಟಿ.ಸಿ ವಂಶ ವೃಕ್ಷ ಹಿಡುವಳಿ ಪತ್ರ ಖಾಸಗಿ ಬ್ಯಾಂಕು ಮತ್ತು ಸಹಕಾರ ಬ್ಯಾಂಕುಗಳಿಂದ ಮೃತರು ಪಡೆದಿರುವ ಸಾಲದ ವಿವರ, ವಿಧಿ ವಿಜ್ಞಾನ ಪ್ರಯೋಗಾಲಯದ ವರದಿಗಳನ್ನು ಪಡೆಯಲಾಗುತ್ತಿದೆ. ಈ

ದಾಖಲಾತಿಗಳನ್ನು ಪಡೆದ ಕೂಡಲೆ ಆತ್ಮಹತ್ಯೆ ಪರಿಶೀಲನಾ ಸಮಿತಿಯು ಪರಿಶೀಲಿಸಿ ಪರಿಹಾರ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳುತ್ತದೆ. ಸಮಿತಿಯ ತೀರ್ಮಾನದಂತೆ ಕ್ರಮ ಕೈಗೊಳ್ಳಲಾಗುವುದು.

ಇ) ಸಾಲ ಬಾಧೆಯಿಂದ ರೈತರು ಆತ್ಮಹತ್ಯೆ ಮಾಡಿಕೊಳ್ಳುವುದನ್ನು ತಡೆಗಟ್ಟಲು ಕೃಷಿ ಇಲಾಖೆಯಿಂದ ಈ ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ.

1. ರಿಯಾಯಿತಿದರದಲ್ಲಿ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಬಿತ್ತನೆ ಬೀಜ ಹಾಗೂ ಇತರೆ ಕೃಷಿ ಪರಿಕರಗಳನ್ನು ವಿತರಿಸಲಾಗುತ್ತಿದೆ.
2. ಪವರ್ ಟಿಲ್ಲರ್ ಮತ್ತು ಹೈಟೆಕ್ ಕೃಷಿ ಉಪಕರಣಗಳನ್ನು ಹನಿ ನೀರಾವರಿ, ತುಂತುರು ನೀರಾವರಿ ಘಟಕಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದೆ.
3. ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ ನೀಡಲಾಗುತ್ತಿದೆ.
4. ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆ
5. ಮಣ್ಣು ಪರೀಕ್ಷೆ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.
6. ಪೀಡೆ ನಾಶಕಗಳು ಹಾಗು ಸಿಂಪರಣಾ ಯಂತ್ರಗಳನ್ನು ರಿಯಾಯಿತಿ ದರದಲ್ಲಿ ಒದಗಿಸಲಾಗುತ್ತಿದೆ.
7. ಎಣ್ಣೆ ಕಾಳು, ದ್ವಿದಳ ಧಾನ್ಯ, ಹತ್ತಿ ಬೆಳೆಗಳಿಗೂ ಸಹ ರಿಯಾಯಿತಿ ದರದಲ್ಲಿ ವಿವಿಧ ಸವಲತ್ತುಗಳನ್ನು ಒದಗಿಸಲಾಗುತ್ತಿದೆ.
8. 2009–10ನೇ ಸಾಲಿನಿಂದ ಶೇ.3 ರ ಬಡ್ಡಿದರದಲ್ಲಿ ವಾಣಿಜ್ಯ ಬ್ಯಾಂಕುಗಳು ಮತ್ತು ಪ್ರಾದೇಶಿಕ ಗ್ರಾಮೀಣಾಬಿವೃದ್ಧಿ ಬ್ಯಾಂಕುಗಳಲ್ಲಿ ಕೃಷಿ ಸಾಲ ನೀಡುವ ಯೋಜನೆ ಜಾರಿಯಲ್ಲಿದೆ.

ಶ್ರೀ ರಾಮಲಿಂಗಾ ರೆಡ್ಡಿ: ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಮಾನ್ಯ ಸಚಿವರು ಒದಗಿಸಿದ್ದಾರೆ. ರಾಜ್ಯ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದರೂ ಕೂಡ ರೈತರ ಆತ್ಮಹತ್ಯೆ ನಿಲ್ಲುತ್ತಿಲ್ಲ. ಶಾಶ್ವತವಾಗಿ ರೈತರ ಆತ್ಮಹತ್ಯೆ ನಿಲ್ಲಬೇಕಾದರೆ ಏನಾದರೂ ಬೇರೆ ಕಾರ್ಯಕ್ರಮ ಹಾಕಿಕೊಳ್ಳಬೇಕು. ತಾವು ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಳ್ಳುತ್ತೀರಿ ಆದರೆ ಮಳೆ–ಬೆಳೆಗಳು ಬರುವುದಿಲ್ಲ.

ರಾಜ್ಯ ಸರಕಾರ ಎಷ್ಟೋ ಹಣ ಖರ್ಚು ಮಾಡಿ ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಂಡರೂ ಮಳೆ-ಬೆಳೆ ಬರದೇ ಈ ತರಹ ಆಗುತ್ತಿದೆ. ರೈತರ ದೃಷ್ಟಿಯಿಂದ ಇನ್ನೇನಾದರೂ ಹೊಸ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆಯೇ ಎಂದು ಕೇಳುವುದಕ್ಕೆ ಇಚ್ಛೆಪಡುತ್ತೇನೆ.

ಶ್ರೀ ಎಸ್ ಎ ರವೀಂದ್ರನಾಥ (ಕೃಷಿ ಸಚಿವರು): ಮಾನ್ಯ ಅಧ್ಯಕ್ಷರೆ, ಈಗಾಗಲೇ ಸಾಕಷ್ಟು ಕಾರ್ಯಕ್ರಮಗಳನ್ನು ನಾವು ಸರ್ಕಾರದಿಂದ ಹಾಕಿಕೊಂಡಿದ್ದೇವೆ. ಅವೆಲ್ಲವನ್ನೂ ಸರಿಯಾದ ರೀತಿಯಲ್ಲಿ implement ಮಾಡುವಂಥ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತದೆ ಎನ್ನುವ ಮಾತನ್ನು ಈ ಸಂದರ್ಭದಲ್ಲಿ ಹೇಳುವುದಕ್ಕೆ ಇಷ್ಟಪಡುತ್ತೇನೆ.

ಕೊಳ್ಳೇಗಾಲ ತಾಲ್ಲೂಕಿನಲ್ಲಿ ಸೇತುವೆ ದುರಸ್ತಿ ಬಗ್ಗೆ

63(557) ಶ್ರೀ ನರೇಂದ್ರ ಆರ್:(ಹನೂರು) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಳ್ಳೇಗಾಲ ತಾಲ್ಲೂಕು, ಸತ್ತೇಗಾಲದ ಬಳಿ ಕಾವೇರಿ ನದಿಗೆ ಕಟ್ಟಿರುವ ಸೇತುವೆಯು ದುರಸ್ತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ದುರಸ್ತಿಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಇ) ಹೊಸ ಸೇತುವೆ ನಿರ್ಮಾಣಕ್ಕೆ ಸರ್ಕಾರದಿಂದ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ?

ಈ) ಹಾಗಿದ್ದಲ್ಲಿ, ಈ ಬಗ್ಗೆ ಕೇಂದ್ರ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಸಿ ಎಂ ಉದಾಸಿ(ಲೋಕೋಪಯೋಗಿ ಸಚಿವರು):

ಅ) ಬಂದಿದೆ.

ಆ) ಈ ಸೇತುವೆಯ ದುರಸ್ತಿಗಾಗಿ ವಾರ್ಷಿಕ ದುರಸ್ತಿ ಮತ್ತು ನಿರ್ವಹಣೆ (ಎಂ. ಅಂಡ್ ಆರ್) ಅನುದಾನ ಅಡಿಯಲ್ಲಿ ರೂ.3.00 ಲಕ್ಷಗಳು ಮಂಜೂರಾಗಿದ್ದು ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.

ಇ) ಹೌದು.